ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
21ನೇ ಮಹಡಿ, ವಿ.ವಿ ಗೋಪುರ,
ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು
560001

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618
Email:directorgokdom@gmail.com
Web: www.gokdom.kar.nic.in

ಸಂಖ್ಯೆ:-ಅಸಂನಿ/ಆ/ಸುತ್ತೋಲೆ/ಸಿಆರ್-30/2021-22 ದಿನಾಂಕ:22.12.2021

## ಸುತ್ತೋಲೆ

ವಿಷಯ: ಎಸ್.ಎಸ್.ಎಲ್.ಸಿ/ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಶೇ.100ರಷ್ಟು ಫಲಿತಾಂಶವನ್ನು ಸಾಧಿಸುವ ಶಾಲೆ/ಕಾಲೇಜುಗಳ ಪ್ರಾಂಶುಪಾಲರು /ಮುಖ್ಯೋಪಾಧ್ಯಾಯರು ಸೇರಿದಂತೆ ಎಲ್ಲಾ ಶಾಲಾ ಸಿಬ್ಬಂದಿಗಳನ್ನು ಗೌರವದಿಂದ ಸನ್ಮಾನಿಸುವ ಕುರಿತು.

>>>$<<<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ 100 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, 21 ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳು, 08 ನವೋದಯ ಮಾದರಿ ವಸತಿ ಶಾಲೆಗಳು, 05 ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು ಹಾಗೂ 200 ಮೌಲಾನಾ ಆಜಾದ್ ಮಾದರಿ ಶಾಲೆಗಳು ಕಾರ್ಯನಿರ್ವಹಿಸುತ್ತೀವೆ. 2021-22ನೇ ಶೈಕ್ಷಣಿಕ ಸಾಲಿನಲ್ಲಿ ಎಸ್.ಎಸ್.ಎಲ್.ಸಿ/ದ್ವಿತೀಯ ಪಿಯುಸಿಯ ತರಗತಿಗಳ ವಾರ್ಷಿಕ ಪರೀಕ್ಷೆಗಳಿಗೆ ಪ್ರಾಂಶುಪಾಲರು/ಮುಖ್ಯೋಪಾಧ್ಯಾಯರು, ಸಹ ಶಿಕ್ಷಕರು ಹಾಗೂ ಇತರೆ ಸಿಬ್ಬಂದಿಗಳು ಶ್ರಮವಹಿಸಿ, ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ, ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಂಡು ಪರೀಕ್ಷೆಯನ್ನು ಭಯರಹಿತವಾಗಿ ಎದುರಿಸಲು ಸಿದ್ಧಪಡಿಸಿ ಶೇ.100 ರಷ್ಟು ಫಲಿತಾಂಶ ಗಳಿಸಿದಲ್ಲಿ ಅಂತಹ ಶಾಲೆ/ಕಾಲೇಜಿನ ಪ್ರಾಂಶುಪಾಲರು /ಮುಖ್ಯೋಪಾಧ್ಯಾಯರು ಸೇರಿದಂತೆ ಎಲ್ಲಾ ಶಾಲಾ ಸಿಬ್ಬಂದಿಗಳನ್ನು ಇಲಾಖೆಯವತಿಯಿಂದ ಗೌರವದಿಂದ ಸನ್ಮಾನಿಸಲಾಗುವುದು.

ಆದ್ದರಿಂದ, ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ಪ್ರಾಂಶುಪಾಲರು ಅಲ್ಪಸಂಖ್ಯಾತರ ವಸತಿ ಶಾಲೆ & ಕಾಲೇಜುಗಳು & ತಾಲ್ಲೂಕು ವಿಸ್ತರಣಾಧಿಕಾರಿಗಳು/ಮುಖ್ಯೋಪಾಧ್ಯಾಯರು, ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆರವರು ತಮ್ಮ ಅಧೀನದ ಶಾಲೆ/ಕಾಲೇಜುಗಳಲ್ಲಿ 2021-22ನೇ ಶೈಕ್ಷಣಿಕ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಶೇ.100 ರಷ್ಟು ಫಲಿತಾಂಶವನ್ನು ಗಳಿಸಲು ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದೆ.

22/12/21
ನಿರ್ದೇಶಕರು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಬೆಂಗಳೂರು.

**ಪ್ರತಿಯನ್ನು ಗೌರವ ಪೂರಕವಾಗಿ ಸಲ್ಲಿಸಿದೆ:-**

1. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:-**

2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
3. ಸಮನ್ವಯಾಧಿಕಾರಿಗಳು, ಅಲ್ಪಸಂಖ್ಯಾತರ ಸಹಾಯವಾಣಿ(24*7)ರವರ ಮಾಹಿತಿಗಾಗಿ.
4. ರಾಜ್ಯದ ಎಲ್ಲಾ ಪ್ರಾಂಶುಪಾಲರು, ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜು.
5. ರಾಜ್ಯದ ಎಲ್ಲಾ ತಾಲ್ಲೂಕು ವಿಸ್ತರಣಾಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
6. ರಾಜ್ಯದ ಎಲ್ಲಾ ಮುಖ್ಯೋಪಾಧ್ಯಾಯರು, ಮೌಲಾನಾ ಆಜಾದ್ ಮಾದರಿ ಶಾಲೆ.
7. ಕಛೇರಿ ಪ್ರತಿ.